ಪುನರ್ರಚಿತವಾದ ಅಕಾಡಮಿಗಳ ಬಗ್ಗೆ,

೪೯೨. ಶ್ರೀ ಪಿ.ಎಂ. ಚಿಕ್ಕಬೋರಯ್ಯ, (ಚಾಮರಾಜ).—ಮಾನ್ಯ ವಾರ್ತಾ ಪ್ರವಾಸೋದ್ಯಮ ಸಂಸ್ಕೃತಿ ಮಂತ್ರು ಬೆಂಗಳೂರು ಅಭಿವೃದ್ಧಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಪುನರ್ರಚಿತವಾದಂತಹ ಅಕಾಡೆಮಿಗಳ ವಿವರಗಳನ್ನು ಪ್ರಕಟಿಸಿದ ನಂತರ ಅವುಗಳಲ್ಲಿನ ಲೋಪದೋಷಗಳ ಬಗ್ಗೆ ವ್ಯಾಪಕ ಆಕ್ಷೇಪಣೆಗಳು ಸರ್ಕಾರದವರ ಗಮನಕ್ಕೆ ಬಂದಿವೆಯೇ?

ಆ) ಅದರಲ್ಲೂ ನಾಟಕ ಅಕಾಡೆಮಿ ಮತ್ತು ಪತ್ರಿಕೋದ್ಯಮ ಅಕಾಡೆಮಿಗಳಲ್ಲಿ ಮೈಸೂರಿ ಜಿಲ್ಲೆಗೆ ಪ್ರಾತಿನಿಧ್ಯವಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?

ಇ) ಹಾಗಿದ್ದಲ್ಲಿ ಈ ಲೋಪ ನಿವಾ ಸಿ ಮೈಸೂರಿಗೆ ಸೂಕ್ತ ಪ್ರಾತಿನಿಧ್ಯವನ್ನು ದೊರಕಿಸಿ ಕೊಡಲಂ ಸರ್ಕಾರದವರು ಕ್ರಮ ಕೈಗೊಳ್ಳುವರೆ ?

ಶ್ರೀ ಎಂ. ಪಿ. ಪ್ರಕಾಶ್ (ವಾರ್ತಾ, ಪ್ರವಾಸೋದ್ಯಮ ಸಂಸ್ಕೃತಿ ಮತ್ತು ಬೆಂಗಳೂರು ಅಭಿವೃದ್ಧಿ ಮಂತ್ರಿಗಳು).—

ಅ) ಇಲ್ಲ.

ಆ) ಮೈಸೂರು ಜಿಲ್ಲೆಗೆ ಪ್ರಾತಿನಿಧ್ಯ ನೀಡಿ ನಾಟಕ ಅಕಾಡಮಿಗೆ ಇಬ್ಬರು ಸದಸ್ಯರನ್ನು ಮತ್ತು ಪತ್ರಿಕಾ ಅಕಾಡಮಿಯಲ್ಲೂ ಒಬ್ಬ ಸದಸ್ಯರನ್ನು ನಾಮನಿರ್ದೇಶನ ಮಾಡುವುದರ ಮುಖಾಂತರ ಮೈಸೂರು ಜಿಲ್ಲೆಗೆ ಪ್ರಾತಿನಿಧ್ಯ ಕೊಟ್ಟಿದೆ.

ಇ) ಪ್ರಶ್ನೆ (ಅ)ಕ್ಕೆ ನೀಡಿರುವ ಉತ್ತರದನ್ವಯ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಚಾಮುಂಡಿ ಬೆಟ್ಟಕ್ಕೆ ''ರೋಪ್‌ವೇ''

೪೯೩. ಶ್ರೀ ಪಿ. ಎಂ. ಚಿಕ್ಕಬೋರಯ್ಯ (ಚಾಮರಾಜ).—ಮಾನ್ಯ ವಾರ್ತಾ, ಪ್ರವಾಸೋದ್ಯಮ, ಸಂಸ್ಕೃತಿ ಮತ್ತು ಬೆಂಗಳೂರು ಅಭಿವೃದ್ಧಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ೧೯೮೧ರಲ್ಲಿ ಮೈಸೂರಿನಲ್ಲಿ ನಡೆದ ರಾಜ್ಯ ಸಂಪುಟ ಸಭೆಯು ಚಾಮುಂಡಿ ಬೆಟ್ಟಕ್ಕೆ ''ರೋಪ್‌ವೇ'' ನಿರ್ಮಿಸಲು ತೀರ್ಮಾನಿಸಿದ್ದುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಈ ಕಾರ್ಯ ಈಗ ಯಾವ ಹಂತದಲ್ಲಿದೆ ಮತ್ತು ಯಾವಾಗ ಪೂರ್ಣಗೊಳ್ಳಬಹುದು?

ಶ್ರೀ ಎಂ. ಪಿ. ಪ್ರಕಾಶ್ (ವಾರ್ತಾ, ಪ್ರವಾಸೋದ್ಯಮ ಸಂಸ್ಕೃತಿ ಮತ್ತು ಬೆಂಗಳೂರು ಅಭಿವೃದ್ಧಿ ಮಂತ್ರಿಗಳು).—

ಅ) ಹೌದು.

ಆ) ಸದರಿ ನಿರ್ಧಾರವನ್ನು ಸಾರ್ವಜನಿಕರ ಅಭಿಪ್ರಾಯದಂತೆ ಹಾಗೂ ಪ್ರಕೃತಿ ಪರಿಸರ ಸಂಘ ಸದಸ್ಯರ ಒಕ್ಕೂರಲಿಗೆ ಮಣಿದು ಕೈಬಿಡಲಾಯಿತು.

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಜನತಾ ಮನೆಗಳ ನಿರ್ಮಾಣ

೪೫೦. ಶ್ರೀ ಜಿ. ಎ. ಆಚಾರ್ (ಬೈಂದೂರು).—ಮಾನ್ಯ ವಸತಿ ರಾಜ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ೧೯೮೭-೮೮ನೇ ಸಾಲಿನಲ್ಲಿ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಎಷ್ಟು ಜನತಾ ಮನೆ ಮತ್ತು ಕಡಿಮೆ ವೆಚ್ಚದ ಮನೆಗಳನ್ನು ರಚಿಸಲು ಮಂಜೂರಾತಿ ನೀಡಲಾಗಿದೆ.